ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2242
ಸದಸ್ಯರ ಹೆಸರು	:	ಶ್ರೀ. ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು	:	ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು
ಉತ್ತರಿಸುವ ದಿನಾಂಕ	:	26.03.2021.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಚಾಮರಾಜನಗರ ಜಿಲ್ಲೆಯಲ್ಲಿ ಎಷ್ಟು ಹೆಕ್ಟೇರ್ ಗಳಲ್ಲಿ ಅರಿಶಿನ ಬೆಳೆಯುತ್ತಾರೆ; ವಾರ್ಷಿಕ ಉತ್ಪಾದನೆ ಅಂದಾಜು ಪ್ರಮಾಣ ಎಷ್ಟು; ಅರಿಶಿನಕ್ಕೆ ವ್ಯವಸ್ಥಿತ ಮಾರುಕಟ್ಟೆಯ ಸೌಲಭ್ಯ ಕಲ್ಪಿಸಲಾಗಿದೆಯೇ;	ಚಾಮರಾಜನಗರ ಜಿಲ್ಲೆಯಲ್ಲಿ 8465 ಹೆಕ್ಟೇರ್‌ಗಳಲ್ಲಿ ಅರಿಶಿನ ಬೆಳೆಯುತ್ತಾರೆ. ವಾರ್ಷಿಕ ಉತ್ಪಾದನೆ ಅಂದಾಜು ಪ್ರಮಾಣ 34744 ಮೆಟ್ರಿಕ್ ಟನ್ ಗಳು. ಚಾಮರಾಜನಗರ ಜಿಲ್ಲೆಯಲ್ಲಿ ಅರಿಶಿಣವನ್ನು ಸ್ಥಳೀಯ ಹಾಗೂ ನಗರ ಪ್ರದೇಶಗಳಲ್ಲಿ ಮಾರಾಟ ಮಾಡಲಾಗುತ್ತಿದ್ದು 2021-22 ನೇ ಸಾಲಿನ ಆಯವ್ಯಯ ಕಂಡಿಕೆ 83. ರಲ್ಲಿ ಚಾಮರಾಜನಗರದಲ್ಲಿ ಅರಿಶಿಣ ಮಾರುಕಟ್ಟೆಯನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರವಾಗಿ ಅಭಿವೃದ್ಧಿ ಪಡಿಸುವುದಾಗಿ ಪ್ರಸ್ತಾಪಿಸಲಾಗಿರುತ್ತದೆ. ಮಾರುಕಟ್ಟೆಯಲ್ಲಿ ಅರಿಶಿಣ ಧಾರಣೆಯು ಕುಸಿತವಾದ ಸಂದರ್ಭದಲ್ಲಿ, ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆಯಡಿ (MIS) ಪರಿಗಣಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.
ಆ)	ಚಾಮರಾಜನಗರದಲ್ಲಿ ಅರಿಶಿನ ಸಂಸ್ಕರಣಾ ಘಟಕವನ್ನು ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?.	ಸಂಸ್ಕರಣಾ ಘಟಕವನ್ನು ಸ್ಥಾಪಿಸಲು ತೋಟಗಾರಿಕೆ ಇಲಾಖೆಯಿಂದ ಈ ಕೆಳಕಂಡ ಯೋಜನೆಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. 1. **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ "Incentives for Post-Harvest Management Activities"** ಕಾರ್ಯಕ್ರಮದಡಿ ಸಂಸ್ಕರಣೆ ಮತ್ತು ಮೌಲ್ಯವರ್ಧನೆ ಘಟಕ ಸ್ಥಾಪಿಸಲು ಒಟ್ಟು ಘಟಕ ವೆಚ್ಚ ರೂ.200.00 ಲಕ್ಷಗಳಿಗೆ ಶೇ.25 ರಂತೆ ಗರಿಷ್ಠ ರೂ50.00 ಲಕ್ಷಗಳವರೆಗೆ ಸಹಾಯಧನ ನೀಡಲಾಗುತ್ತದೆ. 2. **ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ** ಪ್ರಾಥಮಿಕ ಸಂಸ್ಕರಣಾ ಘಟಕ ಸ್ಥಾಪಿಸಲು ಘಟಕದ ವೆಚ್ಚ ರೂ.25.00 ಲಕ್ಷಗಳಿಗೆ ಶೇಕಡ 40ರಂತೆ ರೂ.10.00 ಲಕ್ಷಗಳವರೆಗೆ ಸಹಾಯಧನ ನೀಡಲಾಗುತ್ತದೆ.

Horti 241 HGM 2021

(ಮುನಿರತ್ನ)
ತೋಟಗಾರಿಕೆ ಮತ್ತು ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.